ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೊಸ ಪಶುವೈದ್ಯ ಆಸ್ಪತ್ರೆಗಳು ಪ್ರಾರಂಭ

387 - ಶ್ರೀ ಐ.ಎಂ. ಜಯರಾಮ ಶೆಟ್ಟಿ (ಬೈಂದೂರು) : ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1997-98ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ತೆರೆಯಲು ಉದ್ದೇಶಿಸಿರುವ ಪಶುಸಂಗೋಪನಾ ಚಿಕಿತ್ಸಾಲಯಗಳೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)*

ಆ) *ಇದರಲ್ಲಿ ಬೈಂದೂರು ಕ್ಷೇತ್ರದಲ್ಲಿ ಎಷ್ಟು ಚಿಕಿತ್ಸಾಲಯಗಳನ್ನು ತೆರೆಯಲಾಗುತ್ತಿದೆ, ಮತ್ತು ಯಾವ ಸ್ಥಳಗಳಲ್ಲಿ ತೆರೆಯಲಾಗುವುದು? (ಊರಿನ ಹೆಸರುಗಳನ್ನು ನಮೂದಿಸುವುದು)*

ಶ್ರೀ ಬಿ.ಬಿ. ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಚಿವರು) :

ಅ) 1997-98ನೇ ಸಾಲಿನಲ್ಲಿ ಯಾವುದೇ ಪಶುವೈದ್ಯಕೀಯ ಸಂಸ್ಥೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಶ್ರೀ ಐ.ಎಂ. ಜಯರಾಮಶೆಟ್ಟಿ : ಮಾನ್ಯ ಅಧ್ಯಕ್ಷರೆ, ಬೈಂದೂರು ಗ್ರಾಮೀಣ ಪ್ರದೇಶವಾಗಿರು -ವುದಲ್ಲದೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬಹಳಷ್ಟು ಕಡಿಮೆ ಸಂಖ್ಯೆಯಲ್ಲಿ ಪಶು ವೈದ್ಯಕೀಯ ಚಿಕಿತ್ಸಾಲಗಳಿವೆ. ನಾನು ಕಳೆದ ಬಾರಿ ಕೇಳಿದಾಗ ನಾಲ್ಕು ಪಶು ವೈದ್ಯಕೀಯ ಚಿಕಿತ್ಸಾಲಯಗಳನ್ನು ಕಲ್ಪಿಸಿಕೊಡುವುದಾಗಿ ಇದೇ ಸದನದಲ್ಲಿ ಆಶ್ವಾಸನೆ ಕೊಟ್ಟಿದ್ದು, ಈಗ ನಮ್ಮ ಉತ್ತರದಲ್ಲಿ ಯಾವುದೇ ಪಶು ವೈದ್ಯಕೀಯ ಸಂಸ್ಥೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲವೆಂದು ತಿಳಿಸಿರುವುದರಿಂದ, ಕನಿಷ್ಠ ಪಕ್ಷ ಎರಡು ಪಶು ವೈದ್ಯಕೀಯ ಚಿಕಿತ್ಸಾಲಯಗಳನ್ನಾದರೂ ಕಲ್ಪಿಸಿಕೊಡಬೇಕೆಂದು ತಮ್ಮ ಮೂಲಕ ನಾನು ಮಾನ್ಯ ಸಚಿವರಲ್ಲಿ ಕೇಳಬಯಸುತ್ತೇನೆ.

ಶ್ರೀ ಬಿ.ಬಿ. ನಿಂಗಯ್ಯ : ಮಾನ್ಯ ಅಧ್ಯಕ್ಷರೆ, ನಾವು ಈಗಾಗಲೇ 200 ಪಶು ವೈದ್ಯಕೀಯ ಚಿಕಿತ್ಸಾಲಯಗಳನ್ನು ಇಡೀ ಕರ್ನಾಟಕ ರಾಜ್ಯದಲ್ಲಿ ಬೇಡಿಕೆಗನುಗುಣವಾಗಿ ವೈಜ್ಞಾನಿಕ ದೃಷ್ಟಿಕೋನವಿಟ್ಟುಕೊಂಡು ಹಂಚಿದ್ದೇವೆ. ಮಾನ್ಯ ಸದಸ್ಯರು ತಿಳಿಸಿದಂತೆ ಅವರ ಕ್ಷೇತ್ರಕ್ಕೆ ನಾಲ್ಕು ಪಶುವೈದ್ಯಕೀಯ ಚಿಕಿತ್ಸಾಲಯಗಳನ್ನು ಕಲ್ಪಿಸಿಕೊಡುವುದಾಗಿ ಭರವಸೆ ಕೊಟ್ಟಿದ್ದು ನನಗಂತೂ ನೆನಪಿಲ್ಲ. ಎಲ್ಲಾ ಕ್ಷೇತ್ರಗಳಿಗೂ ಒಂದೊಂದು ಪಶು ವೈದ್ಯಕೀಯ ಚಿಕಿತ್ಸಾಲಯಗಳನ್ನು ಕಲ್ಪಿಸಲು ಕ್ರಮ ಕೈಗೊಂಡಿದ್ದು, ಪಟ್ಟಿಯಲ್ಲಿ ಅವರ ಕ್ಷೇತ್ರ ಬಿಟ್ಟುಹೋಗಿದ್ದರೆ ಸೇರಿಸಿಕೊಡುತ್ತೇವೆ.

ಧಾರವಾಡ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಆಕ್ರಮಗಳು

388 - ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) : ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಧಾರವಾಡ ಹಾಲು ಒಕ್ಕೂಟದ ಅಡಿಯಲ್ಲಿ ಬರುವ ಹಾಲು ಉತ್ಪಾದಕರ ಸಹಕಾರ*